## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2016-17ನೇ ಸಾಲಿನ 14ನೇ ಹಣಕಾಸು ಆಯೋಗದಡಿ ಸಾಮಾನ್ಯ ಕಾರ್ಯಕ್ಷಮತೆ ಅನುದಾನವನ್ನು ಬಿಡುಗಡೆ ಮಾಡುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 10 ಗ್ರಾಪಸ 2015, ದಿನಾಂಕ: 10-03-2015.
2. ಭಾರತ ಸರ್ಕಾರದ ಪತ್ರ ಸಂಖ್ಯೆ:13(32) ಎಫ್ಎಫ್‌ಸಿ/ಎಫ್‌ಸಿಡಿ/2015-16, ದಿನಾಂಕ:08-10-2015.
3. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 11 ಗ್ರಾಪಸ 2016, ದಿನಾಂಕ:11-02-2016.
4. ಭಾರತ ಸರ್ಕಾರದ ಪತ್ರ ಸಂ.ಎಫ್.13(41)ಎಫ್ಎಫ್‌ಸಿ/ಎಫ್‌ಸಿಡಿ/2015-16/, ದಿನಾಂಕ:11-01-2017.
5. ಆರ್ಥಿಕ ಇಲಾಖೆಯ ಜಮಾ ದೃಢೀಕರಣ ಪತ್ರ ಸಂಖ್ಯೆ:ಎಫ್‌ಡಿ 44 ಬಿಜಿಎಲ್ 2016, ದಿನಾಂಕ:24-01-2017.
6. ಪ್ರಧಾನ ಕಾರ್ಯದರ್ಶಿ ಹಾಗೂ ನಿವಾಸಿ ಆಯುಕ್ತರು, ನವದೆಹಲಿ ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ:ಆರ್‌ಸಿಕೆ/ಎಎಲ್‌ಒ(ಎಕೆ)/ 01/2017, ದಿನಾಂಕ:13-01-2017.

**ಪ್ರಸ್ತಾವನೆ:**

14ನೇ ಹಣಕಾಸು ಆಯೋಗ ಅನುದಾನದ ಶಿಫಾರಸ್ಸಿನನ್ವಯ 2016-2017ನೇ ಸಾಲಿನಿಂದ 2019-2020ನೇ ಸಾಲಿನವರೆಗಿನ 4 ವರ್ಷದ ಅವಧಿಗೆ ಸಾಮಾನ್ಯ ಕಾರ್ಯಕ್ಷಮತೆ ಅನುದಾನ ರೂ.928.87 ಕೋಟಿಗಳನ್ನು ಭಾರತ ಸರ್ಕಾರವು ನಿಗಧಿಪಡಿಸಿರುತ್ತದೆ.

14ನೇ ಹಣಕಾಸು ಆಯೋಗ ಅನುದಾನದ 2016-17ನೇ ಸಾಲಿನ ಕಾರ್ಯಕ್ಷಮತೆ ಅನುದಾನ(Performance Grants) ರೂ.179,45,75,000/- (ಒಂದು ನೂರ ಎಪ್ಪತ್ತೊಂಬತ್ತು ಕೋಟಿ ನಲವತ್ತೈದು ಲಕ್ಷದ ಎಪ್ಪತ್ತೈದು ಸಾವಿರ ರೂಪಾಯಿಗಳು ಮಾತ್ರ)ಗಳನ್ನು ಭಾರತ ಸರ್ಕಾರವು ಮೇಲೆ ಓದಲಾದ (4)ರ ಪತ್ರದನ್ವಯ ರಾಜ್ಯದ ಎಲ್ಲಾ ಅರ್ಹ ಗ್ರಾಮ ಪಂಚಾಯತಿಗಳಿಗೆ ಸಂಪೂರ್ಣವಾಗಿ ಬಿಡುಗಡೆ ಮಾಡಿರುತ್ತದೆ.

ಮೇಲೆ ಓದಲಾದ (5)ರ ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ ಜಮಾ ದೃಢೀಕರಣ ಪತ್ರದಲ್ಲಿ 2016-17ನೇ ಸಾಲಿನ ಕಾರ್ಯಕ್ಷಮತೆ ಅನುದಾನದ ರೂ.179,45,75,000/-(ಒಂದು ನೂರ ಎಪ್ಪತ್ತೊಂಬತ್ತು ಕೋಟಿ ನಲವತ್ತೈದು ಲಕ್ಷದ ಎಪ್ಪತ್ತೈದು ಸಾವಿರ ರೂಪಾಯಿಗಳು ಮಾತ್ರ)ಗಳನ್ನು ರಾಜ್ಯದ ಬೊಕ್ಕಸಕ್ಕೆ ಜಮೆಯಾಗಿರುವ ಕುರಿತು ದೃಢೀಕರಣವನ್ನು ನೀಡಿರುತ್ತದೆ.

ಪ್ರಸ್ತುತ 2016-17ನೇ ಸಾಲಿನ ಆರ್ಥಿಕ ವರ್ಷದ ಆಯವ್ಯಯದಲ್ಲಿ ಗ್ರಾಮ ಪಂಚಾಯತಿಯ ಲೆಕ್ಕ ಶೀರ್ಷಿಕೆ 2515-00-198-6-12-300(ಯೋಜನೇತರ)ಯಡಿ ರೂ.18215.00 ಲಕ್ಷಗಳನ್ನು ಒದಗಿಸಿರುತ್ತದೆ. ಸದರಿ ಅನುದಾನದಲ್ಲಿ ರೂ.179,45,75,000/-ಗಳನ್ನು ರಾಜ್ಯದ ಎಲ್ಲಾ ಅರ್ಹ ಗ್ರಾಮ ಪಂಚಾಯತಿಗಳಿಗೆ ಇಂಟರ್‌ನೆಟ್ ಬ್ಯಾಂಕಿಂಗ್ ಮುಖಾಂತರ ನೇರವಾಗಿ ಸಂಬಂಧಪಟ್ಟ ಬ್ಯಾಂಕಿನ ಉಳಿತಾಯ ಖಾತೆಗಳಿಗೆ ಜಮೆ ಮಾಡಲು ಸರ್ಕಾರವು ನಿರ್ಧರಿಸಿರುತ್ತದೆ.

ಆದುದರಿಂದ, ರಾಜ್ಯದಲ್ಲಿನ ಒಟ್ಟು ಅರ್ಹ ಗ್ರಾಮ ಪಂಚಾಯತಿಗಳಿಗೆ ರೂ.179,45,75,000/-ಗಳ 14ನೇ ಹಣಕಾಸು ಆಯೋಗದ ಕಾರ್ಯಕ್ಷಮತೆ ಅನುದಾನವನ್ನು ಬಿಡುಗಡೆಗೊಳಿಸಲಾಗುತ್ತಿದ್ದು, ಗ್ರಾಮ ಪಂಚಾಯತಿಗಳಿಗೆ ಬಿಡುಗಡೆಗೊಳಿಸಿದ ಸಾಮಾನ್ಯ ಮೂಲ ಅನುದಾನದ ಹಾಗೂ ಕಾರ್ಯಕ್ಷಮತೆ ಅನುದಾನದಿಂದ ಶೇ.25ರಷ್ಟು ಅನುದಾನವನ್ನು ಮೇಲೆ ಓದಲಾದ (1)ರ ಆದೇಶದಂತೆ ESCOM ಕಂಪನಿಗಳಿಗೆ ಪಾವತಿಸಬೇಕಾಗಿರುತ್ತದೆ.

ಮುಂದುವರೆದು, ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಬೀದಿ ದೀಪಗಳು ಮತ್ತು ಕುಡಿಯುವ ನೀರಿನ ಸ್ಥಾವರಗಳ ಚಾಲ್ತಿ ತಿಂಗಳುಗಳ ವಿದ್ಯುತ್ ಬಿಲ್ ಪಾವತಿಸಲು 14ನೇ ಹಣಕಾಸು ಆಯೋಗದ ಅನುದಾನದಲ್ಲಿ ಗ್ರಾಮ ಪಂಚಾಯತಿಗಳಿಗೆ ಬಿಡುಗಡೆಗೊಳಿಸುವ ರೂ.179,45,75,000/-ಗಳಲ್ಲಿ ಶೇ.25ರಷ್ಟು ಅಂದರೆ, ರೂ.44,86,43,750/- (ನಲವತ್ತಾಲ್ಕು ಕೋಟಿ ಎಂಬತ್ತಾರು ಲಕ್ಷದ ನಲತ್ತೂರು ಸಾವಿರದ ಏಳು ನೂರ ಐವತ್ತು ರೂಪಾಯಿಗಳು ಮಾತ್ರ)ಗಳ ಮೊತ್ತವನ್ನು ಅರ್ಹ ಗ್ರಾಮ ಪಂಚಾಯತಿಯಲ್ಲಿ ತೆರೆಯಲಾಗಿರುವ ESCROW ಖಾತೆಗಳಿಗೆ ಬಿಡುಗಡೆ ಮಾಡಲು ಮೇಲೆ ಓದಲಾದ (1)ರ ಆದೇಶದಲ್ಲಿ ಸೂಚಿಸಲಾಗಿರುತ್ತದೆ. ESCROW ಖಾತೆಗಳಿಗೆ ಬಿಡುಗಡೆಗೊಳಿಸಿ, ಉಳಿದ ರೂ.134,59,31,250/- (ಒಂದು ನೂರ ಮೂವತ್ತಾಲ್ಕು ಕೋಟಿ ಐವತ್ತೊಂಬತ್ತು ಲಕ್ಷದ ಮೂವತ್ತೊಂದು ಸಾವಿರದ ಎರಡು ನೂರ ಐವತ್ತು ರೂಪಾಯಿಗಳು ಮಾತ್ರ)ಗಳನ್ನು ಗ್ರಾಮ ಪಂಚಾಯತಿಗಳ ಅಭಿವೃದ್ಧಿ ಕಾರ್ಯಗಳಿಗಾಗಿ ಬಿಡುಗಡೆ ಮಾಡಲು ನಿರ್ಧರಿಸಿದೆ. ಅದಕ್ಕಾಗಿ ಈ ಕೆಳಕಂಡ ಆದೇಶ.

### ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 03 ಗ್ರಾಪಸ 2017, ದಿನಾಂಕ:24-01-2017

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ 14ನೇ ಹಣಕಾಸು ಆಯೋಗ ಅನುದಾನದ ಶಿಫಾರಸ್ಸಿನನ್ವಯ 2016-17ನೇ ಸಾಲಿನ ಕಾರ್ಯಕ್ಷಮತೆ ಅನುದಾನವನ್ನು ಭಾರತ ಸರ್ಕಾರವು ರಾಜ್ಯಕ್ಕೆ ಬಿಡುಗಡೆ ಮಾಡಿರುವ ರೂ.179,45,75,000/-(ಒಂದು ನೂರ ಎಪ್ಪತ್ತೊಂಬತ್ತು ಕೋಟಿ ನಲವತ್ತೈದು ಲಕ್ಷದ ಎಪ್ಪತ್ತೈದು

ಸಾವಿರ ರೂಪಾಯಿಗಳು ಮಾತ್ರ)ಗಳಲ್ಲಿ ರೂ.134,59,31,250/- (ಒಂದು ನೂರ ಮೂವತ್ತಾನ್ಲಾಲ್ಕು ಕೋಟಿ ಐವತ್ತೊಂಬತ್ತು ಲಕ್ಷದ ಮೂವತ್ತೊಂದು ಸಾವಿರದ ಎರಡು ನೂರ ಐವತ್ತು ರೂಪಾಯಿಗಳು ಮಾತ್ರ)ಗಳನ್ನು ಗ್ರಾಮ ಪಂಚಾಯತಿಗಳ ಅಭಿವೃದ್ಧಿ ಕಾರ್ಯಗಳಿಗಾಗಿ ಅನುಬಂಧದಲ್ಲಿ ಲಗತ್ತಿಸಿರುವ ಎಲ್ಲಾ ಅರ್ಹ ಗ್ರಾಮ ಪಂಚಾಯತಿಗಳ ಸಂಬಂಧಪಟ್ಟ ಬ್ಯಾಂಕ್ ಖಾತೆಗಳಿಗೆ ನೇರವಾಗಿ ಆನ್‌ಲೈನ್ ಮುಖಾಂತರ ಜಮೆ ಮಾಡಲು ಆದೇಶಿಸಿದೆ.

ಪ್ರಸ್ತುತ ಗ್ರಾಮ ಪಂಚಾಯತಿಗಳಿಗೆ ಬಿಡುಗಡೆ ಮಾಡುತ್ತಿರುವ ರೂ.179,45,75,000/-ಗಳಲ್ಲಿ ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಬೀದಿ ದೀಪಗಳು ಮತ್ತು ಕುಡಿಯುವ ನೀರಿನ ಸ್ಥಾವರಗಳ ಚಾಲ್ತಿ ತಿಂಗಳುಗಳ ವಿದ್ಯುತ್ ಬಿಲ್ ಪಾವತಿಸಲು ಶೇ.25ರಷ್ಟು ಅಂದರೆ, ರೂ.44,86,43,750/-(ನಲವತ್ತಾನ್ಲಾಲ್ಕು ಕೋಟಿ ಎಂಬತ್ತಾರು ಲಕ್ಷದ ನಲತ್ಮೂರು ಸಾವಿರದ ಏಳು ನೂರ ಐವತ್ತು ರೂಪಾಯಿಗಳು ಮಾತ್ರ) ಮೊತ್ತವನ್ನು ಪ್ರತಿ ಗ್ರಾಮ ಪಂಚಾಯತಿಯಲ್ಲಿ ತೆರೆಯಲಾಗಿರುವ ESCROW ಖಾತೆಗಳಿಗೆ ಬಿಡುಗಡೆಗೊಳಿಸಿ ಉಳಿದ ರೂ.134,59,31,250/- (ಒಂದು ನೂರ ಮೂವತ್ತಾನ್ಲಾಲ್ಕು ಕೋಟಿ ಐವತ್ತೊಂಬತ್ತು ಲಕ್ಷದ ಮೂವತ್ತೊಂದು ಸಾವಿರದ ಎರಡು ನೂರ ಐವತ್ತು ರೂಪಾಯಿಗಳು ಮಾತ್ರ)ಗಳನ್ನು (ಅನುಬಂಧ) ಗ್ರಾಮ ಪಂಚಾಯತಿಗಳ ಅಭಿವೃದ್ಧಿ ಕಾರ್ಯಗಳಿಗಾಗಿ ಬಿಡುಗಡೆ ಮಾಡಲು ಆದೇಶಿಸಿದೆ.

14ನೇ ಹಣಕಾಸು ಆಯೋಗ ಅನುದಾನದ ಶಿಫಾರಸ್ಸಿನನ್ವಯ ಸದರಿ ಅನುದಾನವನ್ನು ಕಡ್ಡಾಯವಾಗಿ ಮೇಲೆ ಓದಲಾದ(2)ರ ಭಾರತ ಸರ್ಕಾರದ ಪತ್ರದಲ್ಲಿ ತಿಳಿಸಿರುವಂತೆ ನಿಯಮಾನುಸಾರ ವಿನಿಯೋಗಿಸಬೇಕಾಗಿರುತ್ತದೆ. ಆದಾಗ್ಯೂ ಈ ಅನುದಾನದ ಬಳಕೆಯ ಬಗ್ಗೆ ಪ್ರತ್ಯೇಕವಾಗಿ ವಿವರಗಳನ್ನು ತಿಳಿಸಲಾಗುವುದು.

ಪಂಚಾಯತ್ ರಾಜ್ ಸಂಸ್ಥೆಗಳಿಗೆ ನೀಡಲಾಗುವ ಹಣವನ್ನು ಸರ್ಕಾರದ ಅಧೀನ ಕಾರ್ಯದರ್ಶಿ(ಜಿಲ್ಲಾ ಪಂಚಾಯತ್) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರು ರಾಜ್ಯ ಹುಜೂರ್ ಖಜಾನೆಯಿಂದ ಪೇಯಿಸ್ ರಸೀದಿಯ ಮೇಲೆ ಡ್ರಾ ಮಾಡಿ ನಂತರ ಆರ್.ಟಿ.ಜಿ.ಎಸ್. ಮುಖಾಂತರ 14ನೇ ಹಣಕಾಸು ಆಯೋಗದ ಉಳಿತಾಯ ಖಾತೆ ಸಂಖ್ಯೆ:64207694077 ಸ್ಟೇಟ್ ಬ್ಯಾಂಕ್ ಆಫ್ ಮೈಸೂರು, "ಜಿ ಸೇವಾ" ಬ್ರಾಂಚ್, ಲೇಡಿ ಕರ್ಜನ್ ರಸ್ತೆ, ಬೆಂಗಳೂರು-560001 (IFSC CODE SBMY0040681) ಇವರಿಗೆ ಬಿಡುಗಡೆಗೊಳಿಸಿ, ನಂತರ ಸ್ಟೇಟ್ ಬ್ಯಾಂಕ್ ಆಫ್ ಮೈಸೂರಿನಿಂದ ಇಂಟರ್‌ನೆಟ್ ಬ್ಯಾಂಕಿಂಗ್ ಮುಖಾಂತರ ರಾಜ್ಯದ ಎಲ್ಲಾ ಅರ್ಹ ಗ್ರಾಮ ಪಂಚಾಯತಿಗಳಿಗೆ ಸರ್ಕಾರವು ನಿಗಧಿಪಡಿಸಿರುವ ಮೊತ್ತದ ಅನುಸಾರ ಬಿಡುಗಡೆ ಮಾಡಲು ಆದೇಶಿಸಿದೆ.

ಅನುದಾನವು ಗ್ರಾಮ ಪಂಚಾಯತಿಗಳಿಗೆ ತಲುಪಿರುವುದನ್ನು ಆಯಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಮುಖ್ಯ ಲೆಕ್ಕಾಧಿಕಾರಿಗಳು ದೃಢೀಕರಿಸಿ ಸರ್ಕಾರಕ್ಕೆ ಸಲ್ಲಿಸುವುದು. ಇದರಲ್ಲಿ ಯಾವುದೇ ಲೋಪವಾದಲ್ಲಿ, ಸಂಬಂಧಪಟ್ಟವರಿಂದ ಬಡ್ಡಿ ವಸೂಲಿ ಮಾಡಲು ಆಯಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಕ್ರಮ ವಹಿಸತಕ್ಕದ್ದು.

ಈ ಅನುದಾನವನ್ನು ಮೇಲೆ ಓದಲಾದ (5)ರ ಪತ್ರ ಹಾಗೂ (6)ರ ಅರೆ ಸರ್ಕಾರಿ ಪತ್ರದಲ್ಲಿ ತಿಳಿಸಿದಂತೆ ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 03 ಟಿಎಫ್‌ಪಿ 2016, ದಿನಾಂಕ: 02-04-2016 ಮತ್ತು ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:ಎಫ್‌ಡಿ 06 ಟಿಎಫ್‌ಪಿ 2016, ದಿನಾಂಕ:27-12-2016ರ ಆದೇಶಗಳನ್ವಯ ಲೆಕ್ಕ ಶೀರ್ಷಿಕೆ:2515-00-198-6-12-300 (ಯೋಜನೇತರ)ಯಡಿ ಎಲ್ಲಾ ಅರ್ಹ ಗ್ರಾಮ ಪಂಚಾಯತಿಗಳಿಗೆ ಬಿಡುಗಡೆಗೊಳಿಸಲು ಈ ಆದೇಶವನ್ನು ಹೊರಡಿಸಲಾಗಿದೆ.

24/1/17

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

24/1/2017
(ಪಿ.ದೇವಸಹಾಯಂ)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (ಜಿ ಅಂಡ್ ಎಸ್ ಎಸ್ ಎ), ಸಿ ಬ್ಲಾಕ್, ಹೊಸ ಕಟ್ಟಡ ಪಿ.ಬಿ. ನಂ.5398 ಕರ್ನಾಟಕ, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಇ ಅಂಡ್ ಆರ್ ಎಸ್ ಎ), ಕರ್ನಾಟಕ ಸಿ ಬ್ಲಾಕ್, ಹೊಸ ಕಟ್ಟಡ ಪಿ.ಬಿ. ನಂ.5398, ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಎ ಅಂಡ್ ಇ), ಕರ್ನಾಟಕ ಸಿ ಬ್ಲಾಕ್, ಹೊಸ ಕಟ್ಟಡ ಪಿ.ಬಿ. ನಂ.5398, ಬೆಂಗಳೂರು.
4. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಕಳುಹಿಸುತ್ತಾ, ಸದರಿ ಅನುದಾನದ ಸಮರ್ಪಕ ಬಳಕೆ ಬಗ್ಗೆ ಸೂಕ್ತ ಮೇಲ್ವಿಚಾರಣೆ ನಡೆಸುವ ವ್ಯವಸ್ಥೆ ಕಲ್ಪಿಸಲು ತಿಳಿಸಿದೆ.

5. ರಾಜ್ಯದ ಮುಖ್ಯ ಲೆಕ್ಕಾಧಿಕಾರಿಗಳಿಗೆ/ಮುಖ್ಯ ಯೋಜನಾಧಿಕಾರಿಗಳಿಗೆ ಕಳುಹಿಸಿದೆ.
6. ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಯ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ (ಎಲ್ಲಾ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ) ಸದರಿ ಅನುದಾನವನ್ನು ನಿಯಮಾನುಸಾರ ಬಳಕೆ ಮಾಡಲು ತಿಳಿಸಿದೆ.
7. ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
8. ಉಪ ನಿರ್ದೇಶಕರು, ಎನ್.ಎಂ.ಸಿ. ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
9. ಕರ್ನಾಟಕ ವಿಕಾಸ/ ವೆಬ್‌ಸೈಟ್.
10. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**ಪ್ರತಿಯನ್ನು ಮಾಹಿತಿಗಾಗಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು.
4. ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಬಿ&ಆರ್) ರವರ ಆಪ್ತ ಕಾರ್ಯದರ್ಶಿಗಳು.
5. ಸರ್ಕಾರದ ಉಪ ಕಾರ್ಯದರ್ಶಿ (ಆರ್ಥಿಕ ಆಯೋಗ ಕೋಶ), 4ನೇ ಮಹಡಿ, 4ನೇ ಹಂತ, ಬಹುಮಹಡಿ ಕಟ್ಟಡ, ರವರ ಆಪ್ತ ಸಹಾಯಕರು.
6. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಸಹಾಯಕರು.
7. ನಿರ್ದೇಶಕರು (ಪಂ.ರಾಜ್-1&2). ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಸಹಾಯಕರು.